ಎಂ.ವಿ.ಸಿಃ 227/2025

ಪಿ.ಡಬ್ಲ್ಯುಃ 1

ಸಾಕ್ಷಿಯನ್ನು ಕರೆಸಿ ಪ್ರಮಾಣಿಕರಿಸಲಾಯಿತು.

ದಿನಾಂಕಃ 07-03-2026

ಈ ದಿನ ನಾನು ನ್ಯಾಯಾಲಯಕ್ಕೆ ನನ್ನ ಲಿಖಿತ ಸತ್ಯ ಪ್ರತಿಜ್ಞೆ ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಿರುತ್ತವೆ ಮತ್ತು ಅವುಗಳ ಅಂಶವನ್ನು ಓದಿ ನಾನೇ ಸಹಿ ಮಾಡಿರುತ್ತೇನೆ.



ಮುಂದುವರಿದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಜಿ.ಎಂ.ಎಂ. ವಕೀಲರಿಂದಃ-

ಈ ಪ್ರಕರಣದಲ್ಲಿ ನಾನು ಅರ್ಜಿದಾರನಾಗಿದ್ದೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದೃಢೀಕೃತ ಪ್ರ.ವ. ವರದಿ, ಪಿರ್ಯಾದಿ ನಕಲು, ಘಟನಾ ಸ್ಥಳದ ಪಂಚನಾಮೆ ವರದಿ ಪ್ರತಿ, ಫೋಟೊ ಪ್ರತಿ, ನಕ್ಷೆ, ಐ.ಎಂ.ವಿ. ವರದಿಯ ಪ್ರತಿ, ಗಾಯದ ಪ್ರಮಾಣ ಪತ್ರ, ಒಂದು ಚಾರ್ಜ್ ಶೀಟ್ ಪ್ರತಿಯನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-1 ರಿಂದ ನಿಪಿ-8 ಎಂದು ಗುರುತಿಸಲಾಯಿತು. ಅದೇ ರೀತಿ ಒಂದು ಅಂಗನ್ಯೂನ್ಯತೆ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಸದ್ರಿ ಪ್ರತಿಯನ್ನು ಗುರುತಿಸಲು ಎದ್ರುದಾರರ ಪರ ವಕೀಲರು ತಕರಾರು ಮಾಡಿದ್ದು, ಆದ್ದರಿಂದ ಅದನ್ನು ಸಾಬೀತುಪಡಿಸುವ ತಕರಾರಿಗೆ ಒಳಪಟ್ಟು ನಿಪಿ-9 ಎಂದು ಗುರುತಿಸಲಾಯಿತು. ಒಂದು ಡಿಸ್ಚಾರ್ಜ್ ಸಮರಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು ಗುರುತಿಸಲಾಯಿತು. ಒಟ್ಟು 22 ವೈದ್ಯಕೀಯ ವೆಚ್ಚ ರಶೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ-11 ರಿಂದ ನಿಪಿ-32 ಎಂದು ಗುರುತಿಸಲಾಯಿತು. 10 ಔಷಧಿ ಚೀಟಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ-33 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿಯಲ್ಲಿ ಕೇಳಿಕೊಂಡಂತೆ ಪರಿಹಾರ ಕೊಡಿಸಬೇಕಾಗಿ ವಿನಂತಿ.

**ಪಾಟೀ ಸವಾಲುಃ**

(ಈ ಹಂತದಲ್ಲಿ 2 ನೇ ಎದ್ರುದಾರರ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದರಿಂದ ಪಾಟೀ ಸವಾಲನ್ನು ಮುಂದೂಡಲಾಯಿತು.)

**(ತೆ.ನ್ಯಾದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಿಸಲಾಯಿತು)**

**ಓ ಹೇ ಕೇ ಸರಿ ಇದೆ.**

**ಸಹಿ ಇದೆ.**

**ಮೆಂಬರ್ ಎಡಿಶನಲ್ ಎಂ.ಎ.ಸಿ.ಟಿ. ಮತ್ತು**
**ಹಿರಿಯ ಸಿವಿಲ್ ನ್ಯಾಯಾಧೀಶರು, ಭಟ್ಕಳ.**